ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1248 (1250)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು

ವಿಷಯ : ರಾಜ್ಯ ಹೆದ್ದಾರಿಗಳಲ್ಲಿನ ಟೋಲ್ ಕುರಿತು

(ಅ) ರಾಜ್ಯದಲ್ಲಿನ ಎಷ್ಟು ರಾಜ್ಯ ಹೆದ್ದಾರಿಗಳನ್ನು ಟೋಲ್ ರಸ್ತೆಯನ್ನಾಗಿ ಪರಿವರ್ತಿಸಿದೆ ; ಅವು ಯಾವುವು;

(ಆ) ಈ ಟೋಲ್ ರಸ್ತೆಗಳಲ್ಲಿ ಟೋಲ್ ಸಂಗ್ರಹಿಸುವ ಟೆಂಡರ್‌ನ್ನು ಯಾವ ಸಂಸ್ಥೆಗಳು ಪಡೆದಿವೆ; (ದೂರವಾಣಿ ಸಂಖ್ಯೆಯೊಂದಿಗೆ ವಿವರ ನೀಡುವುದು)

(ಇ) ಟೋಲ್ ಸಂಗ್ರಹಿಸುವ ಸಂಸ್ಥೆಗಳು ರಸ್ತೆಯ ಅಭಿವೃದ್ಧಿ ಮಾಡದಿರುವ ಬಗ್ಗೆ ಇದುವರೆಗೆ ಎಷ್ಟು ದೂರುಗಳು ದಾಖಲಾಗಿವೆ ; ಈ ದೂರುಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಈ) ರಾಜ್ಯದ ಹಲವಾರು ಹೆದ್ದಾರಿಗಳು ಟೋಲ್ ರಸ್ತೆಗಳಾಗಿದ್ದರೂ ರಸ್ತೆ ತುಂಬಾ ಹೊಂಡಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರ ಕೈಗೊಂಡ ಕ್ರಮ ಏನು ?